# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2039 (2392)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ರಾಜ್ಯದಲ್ಲಿ ಮಲೇರಿಯಾ ಕಾಯಿಲೆ ಉಲ್ಬಣಗೊಳ್ಳುತ್ತಿರುವ ಬಗ್ಗೆ

(ಅ) ಕಳೆದ 3 ವರ್ಷಗಳಲ್ಲಿ ಹಲವು ಜಿಲ್ಲೆಗಳಲ್ಲಿ ಇತ್ತೀಚೆಗೆ ಹೆಚ್ಚುತ್ತಿರುವ ಮಲೇರಿಯಾ ರೋಗದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇಂತಹ ಪ್ರಕರಣಗಳು ಹೆಚ್ಚಾಗಿ ಮಕ್ಕಳಲ್ಲಿ ಕಂಡುಬರುತ್ತಿರುವುದು ನಿಜವೇ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಹೆಚ್ಚುತ್ತಿರುವ ಮಲೇರಿಯಾ ಪ್ರಕರಣಗಳು ರಾಜ್ಯದ ನೀರಾವರಿ ಅಚ್ಚುಕಟ್ಟು ಪ್ರದೇಶಕ್ಕೆ ಹೊಂದಿರುವ ಜಿಲ್ಲೆಗಳಲ್ಲಿ ಕಂಡು ಬರುತ್ತಿರುವುದು ನಿಜವೇ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇಂತಹ ಪರಿಸ್ಥಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆ ಅಡಿಯಲ್ಲಿ ಈ ಮಲೇರಿಯಾ ರೋಗವನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು? (ಪೂರ್ಣ ವಿವರ ನೀಡುವುದು)